ಮಾಗಡಿ ಕ್ಷೇತ್ರದ ನೀರಾವರಿ ಅಭಿವೃದ್ಧಿ ಕಾಮಗಾರಿಗಳು

1382 (1668) ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿ 1999-2000ನೇ ಸಾಲಿನಿಂದ ಈವರೆಗೆ ಭಾರಿ ಮತ್ತು ಮಧ್ಯಮ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು ಇವುಗಳಿಗೆ ಮಂಜೂರಾದ ಹಣವೆಷ್ಟು ಎಷ್ಟು ಹಣ ಖರ್ಚು ಮಾಡಲಾಗಿದೆ (ಪ್ರತಿ ಕಾಮಗಾರಿಗಳ ಮಾಹಿತಿ ನೀಡುವುದು)

ಆ) ಇವುಗಳಲ್ಲಿ ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ಇದಕ್ಕೆ ಕಾರಣವೇನು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು):

ಅ) 1999-2000ನೇ ಸಾಲಿನಿಂದ ಈವರೆಗೆ ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿ ಜಲ ಸಂಪನ್ಮೂಲ ಇಲಾಖೆಯಡಿಯ ಈ ಕೆಳಗಿನ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ:-

ಮಂಚನಬೆಲೆ ಯೋಜನಾ ಪ್ರದೇಶದಲ್ಲಿಯ ರಸ್ತೆ ಕಾಮಗಾರಿ - ಅಂದಾಜು ರೂ.20.30 ಲಕ್ಷಗಳು. ಸದರಿ ಕಾಮಗಾರಿಯನ್ನು ಟೆಂಡರ್ ಮೂಲಕ ವಹಿಸಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

ಆ) ಟೆಂಡರ್ ಮೂಲಕ ಕೈಗೊಂಡ ಕಾಮಗಾರಿಯು ಪ್ರಗತಿಯಲ್ಲಿದೆ.

ಮಾಗಡಿ ಕ್ಷೇತ್ರದಲ್ಲಿ ಭೂಸಾರ ಸಂರಕ್ಷಣೆ ಕಾಮಗಾರಿಗಳು

1383 (1669) ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿ 1999-2000ನೇ ಸಾಲಿನಿಂದ ಈವರೆಗೆ ದಶಲಕ್ಷ ಬಾವಿ ಯೋಜನೆ ವಿಶೇಷ ಘಟಕ ಯೋಜನೆ, ಉದ್ಯೋಗ ಭರವಸೆ ಯೋಜನೆ ಮುಂತಾದ ಯೋಜನೆಗಳಲ್ಲಿ ಕೈಗೊಂಡಿರುವ ಭೂಸಾರ ಸಂರಕ್ಷಣೆ ಕಾಮಗಾರಿಗಳು ಯಾವುವು: ಇವುಗಳಿಗೆ ಎಷ್ಟು ಹಣ ಮಂಜೂರಾಗಿದೆ: ಎಷ್ಟು ಹಣ ಖರ್ಚು ಮಾಡಲಾಗಿದೆ: ಎಷ್ಟು ಫಲಾನುಭವಿಗಳು ಈ ಯೋಜನೆಯ ಉಪಯೋಗ ಪಡೆದಿದ್ದಾರೆ (ಪ್ರತಿ ಕಾಮಗಾರಿವಾರು ಮಾಹಿತಿ ನೀಡುವುದು)

ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು):

ಅ) ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿ 1999-2000ನೇ ಸಾಲಿನಿಂದ ಈವರೆವಿಗೆ ವಿಶೇಷ ಘಟಕ ಯೋಜನೆ, ಉದ್ಯೋಗ ಭರವಸೆ ಯೋಜನೆ, ಬಯಲು ಸೀಮೆ ಅಭಿವೃದ್ಧಿ ಯೋಜನೆ ಡಿ.ಪಿ.ಎ.ಪಿ. ರಾಷ್ಟ್ರೀಯ ಜಲಾನಯನ ಅಭಿವೃದ್ಧಿ ಯೋಜನೆ, ಸಮಗ್ರ ಬಂಜರು ಭೂಮಿ ಅಭಿವೃದ್ಧಿ ಯೋಜನೆ ಮುಂತಾದ ಯೋಜನೆಗಳಲ್ಲಿ ಕೈ ಗೊಂಡಿರುವ ಭೂಸಾರ ಸಂರಕ್ಷಣಾ ಕಾಮಗಾರಿಗಳು ಇವುಗಳಿಗೆ ಮಂಜೂರಾದ, ಹಣ, ಖರ್ಚಾದ ಹಣದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ವಿಧಾನ ಸಭಾ ಪ್ರಶ್ನೆ 1669ಕ್ಕೆ ಸಂಬಂಧಿಸಿದಂತೆ ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿ 1999-2000ದಿಂದ ಈವರೆಗೆ ಕೈಗೊಂಡಿರುವ ಭೂಸಾರ ಸಂರಕ್ಷಣಾ ಕಾಮಗಾರಿಗಳ ವಿವರಗಳು:

1) ಮಾಗಡಿ ವಿಧಾನಸಭಾ ಕ್ಷೇತ್ರವು ಮಾಗಡಿ ತಾಲ್ಲೂಕಿನ ಸೋಲೂರು ಹೊಬಳಿಯನ್ನು ಹೊರತುಪಡಿಸಿ, ಉಳಿದ ಎಲ್ಲಾ ಹೊಬಳಿಗಳನ್ನು ಹೊಂದಿರುವುದಲ್ಲದೆ ಬೆಂಗಳೂರು ನಗರ